ಶ್ರೀ ಎಂ.ಪಿ. ಕೇಶವಮೂರ್ತಿ (ಅರಣ್ಯ ರಾಜ್ಯ ಸಚಿವರು):

ಅ) ಹೌದು

ಆ) ಚನ್ನಪಟ್ಟಣ ತಾಲ್ಲೂಕಿನಲ್ಲಿಯ ಗ್ರಾಮೀಣ ಪ್ರದೇಶಗಳಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಎಫ್‌ಎಫ್ಡಿ 61 ಎಫ್ಪಿಎಸ್ 82: ದಿನಾಂಕ : 11-1-83 ರನ್ವಯ ಈ ಅಧಿಸೂಚನೆಯ ದಿನಾಂಕದಿಂದ ಜಾರಿಗೆ ಬರುವಂತೆ ವೃಕ್ಷ ಪ್ರಾಧಿಕಾರವನ್ನು ರಚಿಸಲಾಗಿದೆ. ಅದರ ಸದಸ್ಯರ ವಿವರ ಹೀಗಿದೆ:-

1)	ಅಧ್ಯಕ್ಷರು, ತಾಲ್ಲೂಕು ಅಭಿವೃದ್ಧಿ ಮಂಡಳಿ, ಚನ್ನಪಟ್ಟಣ.	ಛೇರ್ಮನ್
2)	ಕ್ಷೇತ್ರಾಭಿವೃದ್ಧಿ ಅಧಿಕಾರಿ ಚನ್ನಪಟ್ಟಣ.	ಸದಸ್ಯರು
3)	ಉಪ ಅರಣ್ಯ ಸಂರಕ್ಷಣಾಧಿಕಾರಿ ಬೆಂಗಳೂರು ಇವರಿಂದ ನಾಮಕರಣ ಮಾಡಲ್ಪಟ್ಟ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ.	ಸದಸ್ಯರು
4)	ಜಿಲ್ಲಾ ತೋಟಗಾರಿಕೆ ಅಧಿಕಾರಿ.	ಸದಸ್ಯರು
5)	ಅಧ್ಯಕ್ಷರು, ತಾಲ್ಲೂಕು ಅಭಿವೃದ್ಧಿ ಮಂಡಳಿ, ಇವರಿಂದ ನಾಮಕರಣ ಮಾಡಲ್ಪಟ್ಟ ತಾಲ್ಲೂಕು ಅಭಿವೃದ್ಧಿ ಮಂಡಳಿ ಸದಸ್ಯರು.	ಸದಸ್ಯರು

ಚನ್ನಪಟ್ಟಣ ನಗರ ಪ್ರದೇಶಕ್ಕೆ ವೃಕ್ಷ ಪ್ರಾಧಿಕಾರವನ್ನು ರಚಿಸಿರುವುದಿಲ್ಲ.

ದ.ಕನ್ನಡ ಜಿಲ್ಲೆಯ ಶಾಲಾ ವಿದ್ಯಾರ್ಥಿಗಳಿಗೆ ಶೌಚಾಲಯ ಮತ್ತು ಆಟದಮೈದಾನ

50 - ಶ್ರೀ ಬಿ.ಎಂ. ಇದಿನಬ್ಬ (ಉಳ್ಳಾಲ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ದಕ್ಷಿಣ ಕನ್ನಡಜಿಲ್ಲೆಯ ಕಿರಿಯ ಪ್ರಾಥಮಿಕ ಹಾಗೂ ಹಿರಿಯ ಪ್ರಾಥಮಿಕ ಶಾಲೆಗಳ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಶೌಚಾಲಯ ಮತ್ತು ಆಟದ ಮೈದಾನ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಬಂದಿದ್ದರೆ ಅದು ಎಲ್ಲೆಲ್ಲಿ : (ತಾಲ್ಲೂಕುವಾರು ವಿವರ ಕೊಡುವುದು)*

ಇ) *ಆ ರೀತಿಯ ಕೊರತೆಯನ್ನು ನೀಗಿಸಲು ಸರ್ಕಾರದವರು ತೆಗೆದುಕೊಂಡ ಕ್ರಮಗಳೇನು?*

ಶ್ರೀಮತಿ ನಾಗಮ್ಮ ಸಿ. ಕೇಶವಮೂರ್ತಿ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

ಅ) ಬಂದಿದೆ.

ಆ) ಆಟದ ಮೈದಾನ: ಶೌಚಾಲಯ ಇಲ್ಲದಿರುವುದು ಶಾಲೆಗಳ ಸಂಖ್ಯೆ: ಪಟ್ಟಿ (ತಾಲ್ಲೂಕುವಾರು)

ಕ್ರ: ಸಂ:	ತಾಲ್ಲೂಕು	ಜಿಲ್ಲೆಯಲ್ಲಿ ಇರುವ ಒಟ್ಟು ಪ್ರಾಥಮಿಕ ಶಾಲೆಗಳ ಸಂಖ್ಯೆ	ಶೌಚಾಲಯ ವ್ಯವಸ್ಥೆ ಇಲ್ಲದಿರುವ ಶಾಲೆಗಳ ಸಂಖ್ಯೆ	ಆಟದ ಮೈದಾನ ಇಲ್ಲದಿರುವ ಶಾಲೆಗಳ ಸಂಖ್ಯೆ
1.	ಬಂಟ್ವಾಳ	143	86	80
2.	ಬೆಳ್ತಂಗಡಿ	154	65	43
3.	ಕಾರ್ಕಳ	179	146	90
4.	ಕುಂದಾಪುರ	258	206	41
5.	ಮಂಗಳೂರು	147	15	41
6.	ಪುತ್ತೂರು	171	152	106
7.	ಸುಳ್ಯ	132	55	17
8.	ಉಡುಪಿ	145	71	60
	ಒಟ್ಟು	1329	796	478

ಇ) 'ಅಕ್ಷಯ' ಯೋಜನೆಯಡಿಯಲ್ಲಿ ಆಟದ ಮೈದಾನ ಒದಗಿಸುವುದು ಒಂದು ಕಾರ್ಯಕ್ರಮವಾಗಿದ್ದು. ಹಂತ ಹಂತವಾಗಿ 8ನೇ ಪಂಚವಾರ್ಷಿಕ ಯೋಜನೆಯಡಿಯಲ್ಲಿ ಪೂರೈಕೆಮಾಡಲಾಗುವುದು. 1993-94ರಲ್ಲಿ 5000 ಶಾಲೆಗಳಿಗೆ ಪೂರೈಕೆ ಮಾಡಲು ರೂ. 3.00 ಕೋಟಿಗಳನ್ನು ಒದಗಿಸಲಾಗಿದೆ. ಹಾಗೂ 1994-95ರಲ್ಲಿ ರೂ. 3.00 ಕೋಟಿಗಳನ್ನು ಒದಗಿಸಿಕೊಳ್ಳಲಾಗಿದೆ.

ಶೌಚಾಲಯಗಳಿಗೆ ನೀರು ಪೂರೈಕೆಗಾಗಿ ಕಾರ್ಯಕ್ರಮ ಹಾಕಿಕೊಂಡು ಪೂರೈಕೆ ಮಾಡುವ ಯೋಜನೆಯನ್ನು ರೂಪಿಸಲಾಗುತ್ತಿದೆ.

ನ್ಯಾಮತಿಯಲ್ಲಿ ಸರ್ಕಾರಿ ಹೆಣ್ಣುಮಕ್ಕಳ ಕಾಲೇಜನ್ನು ಪ್ರಾರಂಭಿಸುವುದು

223 - ಶ್ರೀ ಡಿ.ಬಿ. ಗಂಗಪ್ಪ (ಹೊನ್ನಾಳಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊನ್ನಾಳಿ ತಾಲ್ಲೂಕಿನ ನ್ಯಾಮತಿಯಲ್ಲಿ ಸರ್ಕಾರಿ ಕಾಂಪೋಜಿಟ್ ಹೆಣ್ಣುಮಕ್ಕಳ ಜೂನಿಯರ್ ಕಾಲೇಜು ಯಾವಾಗ ಪ್ರಾರಂಭಿಸಲಾಗುವುದು.

ಆ) 1994-95ರಲ್ಲಿ ಅದನ್ನು ಪ್ರಾರಂಭಿಸಲಾಗುವುದೇ?

ಶ್ರೀಮತಿ ನಾಗಮ್ಮ ಸಿ. ಕೇಶವಮೂರ್ತಿ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ. ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಆ) ಇಲ್ಲ

ಭದ್ರಾ ಅರಣ್ಯದಲ್ಲಿ ವಾಸಿಸುವ ಜನರ ಸ್ಥಳಾಂತರ

237 - ಶ್ರೀಮತಿ ಮೋಟಮ್ಮ (ಮೂಡಿಗೆರೆ) : ಮಾನ್ಯ ಅರಣ್ಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಮಗಳೂರು ಜಿಲ್ಲೆಯ ಭದ್ರಾ ಅರಣ್ಯದಲ್ಲಿ ವಾಸಿಸುವ ಜನರನ್ನು ಸ್ಥಳಾಂತರಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?